**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ**
"ಸಾರಿಗೆ ಭವನ" , ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027
ದೂರವಾಣಿ ಸಂಖ್ಯೆ: 080-22221321
ವೆಬ್-ಸೈಟ್:ksrtc.karnataka.gov.in

**Karnataka State Road Transport Corporation**
"Transport House", Central Offices,
Shanthinagar, Bengaluru-560 027
Tel: 080-22221321
Website: ksrtc.karnataka.gov.in

**ಸಂ/ಕರಾಸಾ/ಕೇಕ/ಸಂ/ಸಾಮಾನ್ಯ/ 938 /2023-24** **ದಿನಾಂಕ: 12 /06/2023**

## ತಿದ್ದುಪಡಿ ಆದೇಶ

**ವಿಷಯ:** "ಶಕ್ತಿ ಯೋಜನೆಯಡಿ" ರಾಜ್ಯದ ಎಲ್ಲಾ ಮಹಿಳೆಯರಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ಒದಗಿಸುವ ಬಗ್ಗೆ.

**ಉಲ್ಲೇಖ:** 1. ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ 818/2023 ಸಂ/ಕರಾಸಾ/ಕೇಕ/ಸಂ/ಸಾಮಾನ್ಯ/846/2023/24 ದಿನಾಂಕ 07/06/2023
2. ಸೂಕ್ತಾಧಿಕಾರಿಗಳ ಆದೇಶ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯದ ಮಹಿಳೆಯರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ/ವಾಕರಸಾ ಸಂಸ್ಥೆ/ಈಕರಸಾ ನಿಗಮದ ವಾಹನಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸಂಬಂಧ ಉಲ್ಲೇಖ-1ರ ಸಾಮಾನ್ಯ ಸ್ಥಾಯಿ ಆದೇಶದಲ್ಲಿ ನಿರ್ದೇಶನಗಳನ್ನು ನೀಡಲಾಗಿದೆ.

ಮುಂದುವರೆದು, ಸದರಿ ಸಾಮಾನ್ಯ ಸ್ಥಾಯಿ ಆದೇಶದಲ್ಲಿ ನಿಗಮದ ಬಸ್ಸುಗಳಲ್ಲಿ ಪ್ರಯಾಣಿಸುವ ಮಹಿಳೆಯರು ಕರ್ನಾಟಕ ರಾಜ್ಯದ ನಿವಾಸಿಗಳೆಂಬ ಪುರಾವೆಗಾಗಿ ತೋರಿಸಬೇಕಾದ ದಾಖಲಾತಿಗಳಲ್ಲಿ ಮೂಲ ಗುರುತಿನ ಚೀಟಿ ಅಥವಾ ಡಿಜಿಲಾಕರ್(Digilocker) ಮುಖಾಂತರ ಹಾಜರುಪಡಿಸಬೇಕಾಗಿರುತ್ತದೆ ಎಂದು ತಿಳಿಸಲಾಗಿರುತ್ತದೆ. ಅದಾಗ್ಯೂ, ಮಹಿಳಾ ಪ್ರಯಾಣಿಕರ ಅನುಕೂಲಕ್ಕಾಗಿ ಉಲ್ಲೇಖಿತ ಆದೇಶದಲ್ಲಿ ನಮೂದಿಸಿರುವ ಗುರುತಿನ ಚೀಟಿಗಳ ನಕಲು ಪ್ರತಿಯನ್ನು ಸಹ ಮಾನ್ಯ ಮಾಡಲು ನಿರ್ಧರಿಸಿದೆ. ಆದುದರಿಂದ ಉಲ್ಲೇಖಿತ ಸಾಮಾನ್ಯ ಸ್ಥಾಯಿ ಆದೇಶದಲ್ಲಿ ಈ ಕೆಳಕಂಡಂತೆ ಮಾರ್ಪಾಡಿಸಲಾಗಿದೆ.

**ಮಹಿಳಾ ಪ್ರಯಾಣಿಕರು ತಮ್ಮ ಪ್ರಯಾಣದ ಸಮಯದಲ್ಲಿ ಉಲ್ಲೇಖಿತ ಸಾಮಾನ್ಯ ಸ್ಥಾಯಿ ಆದೇಶದಲ್ಲಿ ನಿಗದಿಪಡಿಸಲಾಗಿರುವ ಗುರುತಿನ ಚೀಟಿಗಳ ಮೂಲ/ನಕಲು/ಡಿಜಿಲಾಕರ್ (ಹಾರ್ಡ್ ಮತ್ತು ಸಾಫ್ಟ್ ಕಾಪಿ ) ಮಾದರಿಯಲ್ಲಿ ಹಾಜರುಪಡಿಸಿ ಪ್ರಯಾಣಿಸಲು ಅನುಮತಿಸಿದೆ.**

ಇನ್ನುಳಿದಂತೆ ಸಾಮಾನ್ಯ ಸ್ಥಾಯಿ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

**ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ)**

**ಪ್ರತಿಯನ್ನು:**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರ ಹಿರಿಯ/ಆಪ್ತ ಕಾರ್ಯದರ್ಶಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಮೇಲ್ಕಂಡ ವಿಷಯವನ್ನು ಮಾನ್ಯರ ಅವಗಾಹನೆಗೆ ತರಲು ಕೋರಲಾಗಿದೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಮಸಾಸಂ/ವಾಕರಸಾಸಂ/ಕಕರಸಾನಿ ರವರಿಗೆ ಮಾಹಿತಿಗಾಗಿ.
3. ಮುಖ್ಯ ಸಂಚಾರ ವ್ಯವಸ್ಥಾಪಕರು, ಬೆಮಸಾಸಂ/ವಾಕರಸಾಸಂ/ಕಕರಸಾನಿ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಎಲ್ಲಾ ಇಲಾಖಾ ಮುಖ್ಯಸ್ಥರು, ಕರಾರಸಾನಿ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
5. ಎಲ್ಲಾ ಹಿರಿಯ/ವಿಭಾಗ ನಿಯಂತ್ರಣಾಧಿಕಾರಿಗಳು, ಕರಾರಸಾನಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6. ಪ್ರಾಂಶುಪಾಲರು/ಕಾರ್ಯ ವ್ಯವಸ್ಥಾಪಕರು, ಕರಾರಸಾನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ವಿಭಾಗ ಸಂಚಲನಾಧಿಕಾರಿ, ಕರಾರಸಾ ನಿಗಮ, ಅವತಾರ್ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
8. ಹಿರಿಯ/ಆಪ್ತ ಕಾರ್ಯದರ್ಶಿ, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಸಿ:ಜಾ)/ ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ

Scanned by CamScanner